# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 27.06.2011**

ವಿಶ್ವ ಮೆಟ್ರೋಪಾಲಿಟನ್ ನಗರಗಳ ಒಕ್ಕೂಟದ ಪ್ರತಿನಿಧಿಗಳ ನಿಯೋಗ ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರನ್ನು ಭೇಟಿಯಾಗಿ ನವೆಂಬರ್ 10, 2011 ರಂದು ಬ್ರೆಜಿಲ್‌ನಲ್ಲಿ ನಡೆಯುವ ವಿಶ್ವ ಮೆಟ್ರೋಪಾಲಿಟನ್ ಸಮಾವೇಶಕ್ಕೆ ಆಗಮಿಸಲು ಆಹ್ವಾನ ನೀಡಿತು.

Metropolis ಒಕ್ಕೂಟದ Secretary General, Joseph Roig ರವರು ಪೂಜ್ಯ ಮಹಾಪೌರರಿಗೆ ಬ್ರೆಜಿಲ್ ಸಮಾವೇಶಕ್ಕೆ ಹಾಜರಾಗುವಂತೆ ಆಹ್ವಾನಿಸಿ, ಈ ಒಕ್ಕೂಟವು ವಿಶ್ವದ ಬೇರೆ ಬೇರೆ ಬೃಹತ್ ನಗರಗಳಲ್ಲಿ ಕೈಗೊಂಡಿರುವ ಉತ್ತಮ ಪದ್ಧತಿ, ಮಾಹಿತಿ ಮತ್ತು ಅನುಭವಗಳನ್ನು ಹಂಚಿಕೊಳ್ಳಲು ಒಂದು ಉತ್ತಮ ವೇದಿಕೆಯಾಗಿದ್ದು, ಈ ಸಮಾವೇಶದಲ್ಲಿ ವಿಶ್ವದ ನೂರಾರು ನಗರದ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಬೆಂಗಳೂರು ಮಹಾನಗರವು ಕೂಡಾ ವಿಶ್ವ ಮೆಟ್ರೋಪಾಲಿಟನ್ ಒಕ್ಕೂಟದ ಸದಸ್ಯ ನಗರವಾಗಿದ್ದು, 2012ರಲ್ಲಿ ವಿಶ್ವ ಮೆಟ್ರೋಪಾಲಿಟನ್ ನಗರಗಳ ಸಮಾವೇಶವನ್ನು ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲು ಒಕ್ಕೂಟವು ತೀರ್ಮಾನಿಸಿದೆ. ಬೆಂಗಳೂರಿನಲ್ಲಿ ನಡೆಯುವ ಸಮಾವೇಶಕ್ಕೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಸಂಪೂರ್ಣ ಸಹಕಾರ ನೀಡಬೇಕೆಂದು ಮಹಾಪೌರರಲ್ಲಿ ಮನವಿ ಮಾಡಿದರು. ಪೂಜ್ಯ ಮಹಾಪೌರರು ಅದಕ್ಕೆ ಸಮ್ಮತಿಸಿ, ಸಹಕಾರ ನೀಡುವುದಾಗಿ ತಿಳಿಸಿದರು.

ಪಾಲಿಕೆ ಆಯುಕ್ತರು ಮಾತನಾಡಿ, ಬೆಂಗಳೂರು ನಗರದ ಇತಿಹಾಸ, ಮಹಾನಗರ ಪಾಲಿಕೆಯ ರಚನೆ, ಕಾರ್ಯ ವಿಧಾನ ಮತ್ತು ಘನತ್ಯಾಜ್ಯ ವಸ್ತು ವಿಲೇವಾರಿ ಮುಂತಾದ ವಿಷಯಗಳ ಕುರಿತು ಸಂಕ್ಷಿಪ್ತವಾಗಿ ವಿವರಿಸಿ, ಬೆಂಗಳೂರಿನಲ್ಲಿ ನಡೆಯುವ ಸಮಾವೇಶಕ್ಕೆ ಬೇಕಾಗುವ ಎಲ್ಲಾ ವಿವರಗಳನ್ನು ನೀಡುವಂತೆ ನಿಯೋಗಕ್ಕೆ ಕೋರಿದರು.

ಈ ಸಂದರ್ಭದಲ್ಲಿ ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ ಮತ್ತು ಡಾ॥ ಎ. ರವೀಂದ್ರ, ಮುಖ್ಯಮಂತ್ರಿಯವರ ಸಲಹೆಗಾರರು (ನಗರಾಭಿವೃದ್ಧಿ ವಿಷಯಗಳು) ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು–560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 27.06.2011**

ಈ ಹಿಂದೆ ಕಾರ್ಲಟನ್ ಟವರ್ಸ್ ಕಟ್ಟಡಕ್ಕೆ ಸಂಬಂಧಿಸಿದಂತೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿ, ನಗರದಲ್ಲಿರುವ ಬಹುಮಹಡಿ ಕಟ್ಟಡಗಳಲ್ಲಿ ಸುರಕ್ಷತೆ ಕುರಿತು ಅಳವಡಿಸಲಾಗಿರುವ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಿ, ಕೂಡಲೇ ನ್ಯಾಯಾಲಯಕ್ಕೆ ವರದಿಯನ್ನು ಸಲ್ಲಿಸಲು ಕರ್ನಾಟಕ ಉಚ್ಛ ನ್ಯಾಯಾಲಯವು ಮಹಾನಗರ ಪಾಲಿಕೆಗೆ ಆದೇಶ ನೀಡಿತ್ತು. ಈ ಹಿನ್ನೆಲೆಯಲ್ಲಿ ಪಾಲಿಕೆ ಆಯುಕ್ತರು ಸಭೆ ನಡೆಸಿ, ನಗರ ಯೋಜನೆ, ಅಗ್ನಿಶಾಮಕ ದಳ, ಮತ್ತು ವಲಯ ಅಭಿಯಂತರರುಗಳನ್ನೊಳಗೊಂಡ 6 ತಂಡಗಳನ್ನು ರಚಿಸಿ, ಬಹುಮಹಡಿ ಕಟ್ಟಡಗಳ ಪರಿಶೀಲನೆ ನಡೆಸಿ, ಒಂದು ವಿವರವಾದ ಕ್ರಿಯಾ ಯೋಜನೆಯನ್ನು ರೂಪಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದರು.

ದಿನಾಂಕ: 27.06.2011 ರಂದು ಮತ್ತೆ ಕಾರ್ಲಟನ್ ಟವರ್ಸ್ ಕಟ್ಟಡಕ್ಕೆ ಸಂಬಂಧಿಸಿದಂತೆ ಕರ್ನಾಟಕ ಉಚ್ಛ ನ್ಯಾಯಾಲಯವು ವಿಚಾರಣೆ ನಡೆಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯವರು ಸಲ್ಲಿಸಿದ ಕ್ರಿಯಾ ಯೋಜನೆಯನ್ನು ಉಚ್ಛ ನ್ಯಾಯಾಲಯವು ಅವಲೋಕಿಸಿ, ಪಾಲಿಕೆಯಿಂದ ಕ್ರಮ ಕೈಗೊಂಡಿದ್ದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿತು. ಹಾಗೂ ಸಲ್ಲಿಸಿರುವ ಕ್ರಿಯಾ ಯೋಜನೆಯನ್ನು ಪರಿಶೀಲಿಸಿ, ಎರಡು ವಾರದ ಒಳಗಾಗಿ ಅಧಿಸೂಚನೆಯನ್ನು ಹೊರಡಿಸುವಂತೆ ಸರ್ಕಾರಕ್ಕೆ ಆದೇಶಿಸಿ ಪ್ರಕರಣವನ್ನು ಮುಕ್ತಾಯಗೊಳಿಸಿತು.

**ಸಾರ್ವಜನಿಕ ಸಂಪರ್ಕಾಧಿಕಾರಿ**